**ದಿನಾಂಕಃ 05-01-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು .**

**ಪಾಟೀ ಸವಾಲುಃ 1 ಮತ್ತು 2 ನೇ ಪ್ರತಿವಾದಿ ಪರ ಶ್ರೀ. ಎಂ ಕೆ ಐ ವಕೀಲರಿಂದಃ**

1. ವಾದಿ ಮತ್ತು ಪ್ರತಿವಾದಿಯವರು ಒಂದೇ ಘರಾಣೆದ ಸದಸ್ಯರು ಎಂದರೆ ಸರಿ. ದಾವಾ ಆಸ್ತಿಗಳು ಪಿತ್ರಾರ್ಜಿತ ಆಸ್ತಿಗಳು ಎಂದರೆ ಸರಿ. ದಾವಾ ಎ ಶೆಡ್ಯೂಲ್ ನ ಐಟಂ ನಂಃ 1 ರ 3 ನೇ ಆಸ್ತಿ ಸಹ ಪಿತ್ರಾರ್ಜಿತ ಆಸ್ತಿ ಎಂದರೆ ಸರಿ. ದಾವಾ ಎ ಶೆಡ್ಯೂಲ್ ನ ಐಟಂ ನಂಃ 2 ರ ವಿ ಪಿ ಸಿ ಆಸ್ತಿ ಸಹ ಪಿತ್ರಾರ್ಜಿತ ಆಸ್ತಿ ಎಂದರೆ ಸರಿ. ದಾವಾ ಎ ಶೆಡ್ಯೂಲ್ ನ ಐಟಂ ನಂ 3 ನೇ ಆಸ್ತಿ ಹಾಗೂ ಐಟಂ ನಂಃ 2 ರ ವಿ ಪಿ ಸಿ ಆಸ್ತಿಯನ್ನು ಪ್ರತಿವಾದಿ 1 ಮತ್ತು 2 ನೇ ದವರು 3 ನೇ ಪ್ರತಿವಾದಿಯವರ ಗಂಡನ ಹೆಸರಿನಲ್ಲಿ ಪಿತ್ರಾರ್ಜಿತ ಆಸ್ತಿಯಿಂದ ಬಂದಂತಹ ಆದಾಯದಿಂದ ಖರೀದಿಗೆ ಹಿಡಿದಿದ್ದು ಇರುತ್ತದೆ ಎಂದರೆ ಸರಿ. ದಾವಾ ಆಸ್ತಿಗಳ ಬಗ್ಗೆ ನನ್ನ ತಂದೆ ಮತ್ತು ನಮ್ಮ ತಂದೆಯ ಸಹೋದರರ ನಡುವೆ ಇಲ್ಲಿಯವರೆಗೂ ಯಾವುದೇ ಪಾಲು ವಿಭಾಗ ಆಗಿಲ್ಲ ಎಂದರೆ ಸರಿ. ದಾವಾ ಆಸ್ತಿಗಳು ಪಿತ್ರಾರ್ಜಿತ ಆಸ್ತಿಗಳಾಗಿರುವುದರಿಂದ ಪ್ರತಿವಾದಿ 1 ಮತ್ತು 2 ರವರಿಗೆ ಸಮಾನ ಹಕ್ಕು ಇರುತ್ತದೆ ಎಂದರೆ ಸರಿ.

**ಪಾಟೀ ಸವಾಲುಃ** 3 ರಿಂದ 6 ನೇ ಪ್ರತಿವಾದಿ ಪರ ವಕೀಲರನ್ನು ಪದೇ-ಪದೇ ಕೂಗಿ ಕರೆಯಲಾಯಿತು, ಗೈರು ಹಾಜರು ಇರುವುದರಿಂದ ಪಾಟೀ ಸವಾಲಿಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

ಸಹಿ/-
1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ ರಾಣೇಬೆನ್ನೂರು.